ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ರಿಂದ 8ರವರೆಗೆ.

ಉಪಾಧ್ಯಕ್ಷರು : ಪ್ರಸ್ತಾವವೇನೆಂದರೆ ಖಂಡ 2 ರಿಂದ 8ನೇ ಖಂಡಗಳು ಈ ವಿಧೇಯಕದ ಅಂಗವಾಗಿರಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 8ವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಮೊದಲನೆಯ ಖಂಡ ಹೆಸರು ಮತ್ತು ಅವತರಣಿಕೆ

ಉಪಾಧ್ಯಕ್ಷರು : ಪ್ರಸ್ತಾವವೇನೆಂದರೆ, ಮೊದಲನೇ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟವು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ, ಸಂಸದೀಯ ವ್ಯವಹಾರಗಳ ಮಂತ್ರಿ): ಮಾನ್ಯ ಅಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ಸ್ಥಳೀಯ ಪ್ರದೇಶಗಳೊಳಗೆ ಅಲ್ಲಿಗೆ, ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವನೆ ಏನೆಂದರೆ "1991ನೇ ಸಾಲಿನ ಕರ್ನಾಟಕ ಸ್ಥಳೀಯ ಪ್ರದೇಶಗಳೊಳಗೆ ಅಲ್ಲಿಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಣ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕ, 1991

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ, ಸಂಸದೀಯ ವ್ಯವಹಾರಗಳ ಮಂತ್ರಿ) : ಮಾನ್ಯ ಉಪಾಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ, ಸಂಸದೀಯ ವ್ಯವಹಾರಗಳ ಮಂತ್ರಿ): ಮಾನ್ಯ ಉಪಾಧ್ಯಕ್ಷರೇ, ಇದು ಕೂಡ ಬಜೆಟ್‌ನಲ್ಲಿ ಇದ್ದಂಥ ವಿಚಾರ. ಇದು ಚರ್ಚೆಗೆ ಬಂದು ಸಾಮಾನ್ಯ ಚರ್ಚೆಯಲ್ಲಿ ಕೂಡ ಇದರ ಬಗ್ಗೆ ಚರ್ಚೆ ಮಾಡಲಾಗಿದೆ. ಆದ್ದರಿಂದ ಇದಕ್ಕೆ ಸದನ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 4ರವರೆಗೆ ವಿಧೇಯಕವನ್ನು ಪರ್ಯಾಲೋಚಿಸುವುದು

ಉಪಾಧ್ಯಕ್ಷರು : ಈ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ 2ರಿಂದ 4ನೇ ಖಂಡಗಳು, ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 2 ಮತ್ತು 4ನೇ ಖಂಡಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗಗಳು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟವು)

ಅನುಮೋದನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ, ಸಂಸದೀಯ ವ್ಯವಹಾರಗಳ ಮಂತ್ರಿ) : ಮಾನ್ಯ ಉಪಾಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ವೃತ್ತಿಗಳ, ಕಸಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ 1991

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಸಚಿವರು) : (ಮುಖ್ಯಮಂತ್ರಿಗಳ ಪರವಾಗಿ) ಸನ್ಮಾನ್ಯ ಅಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ವೃತ್ತಿಗಳ, ಕಸಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ವೀರಪ್ಪಮೊಯಿಲಿ : ಸನ್ಮಾನ್ಯ ಅಧ್ಯಕ್ಷರೇ, ಇದು ವೃತ್ತಿಗಳ ಮತ್ತು ಕಸಬುಗಳ ವಿಚಾರದಲ್ಲಿ, ವೃತ್ತಿ ತೆರಿಗೆಯನ್ನು ಹೆಚ್ಚುಮಾಡುವಂಥ ಒಂದು ಮಸೂದೆ. ಇದರ ಬಗ್ಗೆ ಸನ್ಮಾನ್ಯ ಉಪನಾಯಕರು ಬೆಳಿಗ್ಗೆ ಮಾತನಾಡಿದ್ದಾರೆ. ಪ್ರಮುಖವಾಗಿ ಉಪನಾಯಕರು ಒಂದು ಪ್ರಶ್ನೆಯನ್ನು ಎತ್ತಿದ್ದಾರೆ. ಇದು ವಾಣಿಜ್ಯ ವಿದ್ಯಾಸಂಸ್ಥೆಗಳಿಗೆ ಸಂಬಂಧಪಟ್ಟಿದ್ದು. ಅವರು ಯಾವುದೇ ಕ್ಯಾಪಿಟೇಷನ್ ಫೀ ತೆಗೆದುಕೊಳ್ಳುವುದಿಲ್ಲ. ಬಡವರು ಟೈಪಿಂಗ್ ಕ್ಲಾಸಿಗೆ ಬರುತ್ತಾರೆ. ಎಂದು ಈ ಸದನದಲ್ಲಿಯೂ ಹೇಳಿದ್ದಾರೆ. ಆಸದನದಲ್ಲಿಯೂ ಇದು ಪ್ರಸ್ತಾಪಕ್ಕೆ ಬಂತು. ಇದರ ಬಗ್ಗೆ ಸಾಕಷ್ಟು ನಿವೇದನೆ